ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 26ನೇ ಫೆಬ್ರವರಿ, 2014
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2013ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ವರದಿಯನ್ನು ಸಭೆಯ ಮುಂದಿಡುವುದು.

2. ವರದಿಯನ್ನೊಪ್ಪಿಸುವುದು

ಶ್ರೀ ಬಿ.ಆರ್. ಯಾವಗಲ್ (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು 2013-14ನೇ ಸಾಲಿನ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯು ಕೈಗೊಂಡ ವಿದೇಶ ಅಧ್ಯಯನ ಪ್ರವಾಸದ ವರದಿಯನ್ನು ಒಪ್ಪಿಸುವುದು

3. ವಿತ್ತೀಯ ಕಾರ್ಯಕಲಾಪಗಳು

ಅ) 2014-15ನೇ ಸಾಲಿನ ಆಯವ್ಯಯದ ಮೇಲಿನ ಸಾಮಾನ್ಯ ಚರ್ಚೆಗೆ ಸರ್ಕಾರದ ಉತ್ತರ.

ಆ) 2013-14ನೇ ಸಾಲಿನ ಪೂರಕ ಅಂದಾಜುಗಳಿಗೆ (ಎರಡನೇ ಕಂತು) ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಪು.ತಿ.ನೋ.,.

4. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕ, 2014
ಶ್ರೀ ವಿನಯ ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು

ಅ) 2014 ನೇ ಸಾಲಿನ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

ಆ) ದಿನಾಂಕ 24.02.2014ರ ಹನ್ನೊಂದನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಜಿ.ಟಿ. ದೇವೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 158(2786) : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಎನ್.ರಾಜಣ್ಣ ಮತ್ತು ಈ. ತುಕಾರಾಂ ಅವರುಗಳು ಬೆಂಗಳೂರು ಉತ್ತರ ತಾಲ್ಲೂಕು ಯಶವಂತಪುರ ಹೋಬಳಿ ಕೊಡಿಗೇಹಳ್ಳಿ ಗ್ರಾಮದ ಸರ್ವೆ ನಂ 31ರಲ್ಲಿನ ನಾಲ್ಕು ಎಕರೆ ಭೂಮಿಯನ್ನು ವಿಶೇಷ ಭೂಸ್ವಾಧೀನಾಧಿಕಾರಿ-2 ಇವರು ಭೂಸ್ವಾಧೀನ ಮಾಡಿ ಸಾರ್ವಜನಿಕ ಉದ್ದೇಶಕ್ಕೆ ಬಳಸದೆ ಇರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಎಲ್.ಎ. ರವಿ ಸುಬ್ರಮಣ್ಯ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ 50ರ ಕಸ್ತೂರಿ ನಗರದ ರಾಜಾ ಕಾಲುವೆಗಳಲ್ಲಿ ತ್ಯಾಜ್ಯ ವಸ್ತುಗಳು ತುಂಬಿರುವುದರಿಂದ ಕಲುಷಿತ ನೀರು ಮುಂದೆ ಹರಿಯದೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3. ಶ್ರೀ ಲಕ್ಷ್ಮಣ ಸಂಗಪ್ಪ ಸವದಿ ಅವರು ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಸಹಾಯಕ ಸಾರಿಗೆ ಪರಿವೀಕ್ಷಕರ ಕಚೇರಿ ಪ್ರಾರಂಭಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

4. ಶ್ರೀ ಪ್ರಮೋದ್ ಮಧ್ವರಾಜ್ ಅವರು ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದ್ಧೀಕರಣ ಯೋಜನೆ ಅನ್ವಯ ಅರ್ಜಿಗಳನ್ನು ಸ್ವೀಕರಿಸಲು ನಿಗದಿ ಮಾಡಿರುವ ಕೊನೆ ದಿನಾಂಕವನ್ನು ಮಾರ್ಚ್ 31, 2014ರ ವರೆಗೆ ವಿಸ್ತರಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

5. ಡಾ|| ಕೆ. ಶ್ರೀನಿವಾಸ ಮೂರ್ತಿ ಅವರು ನೆಲಮಂಗಲ ಪೋಲೀಸ್ ಠಾಣೆಯಲ್ಲಿ ಪೋಲೀಸ್‌ರ ಕೊರತೆ ಹಾಗೂ ಅಗತ್ಯ ವಾಹನ ಮತ್ತು ಭದ್ರತಾ ಸಲಕರಣೆಗಳು ಇಲ್ಲದಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯವುದು.

6. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ಪಾವಗಡ ತಾಲ್ಲೂಕು ಪಳವಳ್ಳಿ ವ್ಯವಸಾಯ ಸೇವಾ ಸಹಕಾರ ಸಂಘವು ರೈತರಿಗೆ ಮತ್ತು ಮಹಿಳಾ ಸ್ವಸಹಾಯ ಸಂಘಗಳಿಗೆ ಮಾಡಿರುವ ವಂಚನೆ ಬಗ್ಗೆ ತನಿಖೆ ನಡೆಸಲು ಆದೇಶವಾಗಿದ್ದರೂ ಈ ಬಗ್ಗೆ ಯಾವುದೇ ಕ್ರಮಕೈಗೊಳ್ಳದಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

7. ಡಾ|| ರಫೀಕ್ ಅಹ್ಮದ್ ಎಸ್. ಅವರು ತುಮಕೂರು ಕೈಗಾರಿಕಾ ತರಬೇತಿ ಸಂಸ್ಥೆಗೆ ಸ್ವಂತ ಕಟ್ಟಡ ಮಂಜೂರು ಮಾಡುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

8. ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಮತ್ತು ಎಂ.ಟಿ. ಕೃಷ್ಣಪ್ಪ ಅವರುಗಳು ರಾಜ್ಯದ ಕೆ.ಆರ್.ಡಿ.ಸಿ.ಎಲ್ ವತಿಯಿಂದ ಚಿಕ್ಕನಾಯಕನಹಳ್ಳಿ -ಹಾಸನ ಮಾರ್ಗದ ತಿಪಟೂರು-ಗಂಡಸಿ-ದುದ್ದ ರಸ್ತೆಯನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದಿಂದ ಟೋಲ್ ಸಂಗ್ರಹಿಸಿ ಅಭಿವೃದ್ಧಿಪಡಿಸುವ ಯೋಜನೆಯ ಕಾಮಗಾರಿಯು ಪೂರ್ಣಗೊಳ್ಳದೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಸಿ.ಟಿ. ರವಿ ಅವರು 2012-13ನೇ ಸಾಲಿನಲ್ಲಿ ಚಿಕ್ಕಮಗಳೂರಿಗೆ ಮಂಜೂರಾಗಿರುವ ಇಂಜಿನಿಯರಿಂಗ್ ಕಾಲೇಜು ಹಾಗೂ ಆಲ್ದೂರು, ಕೊಪ್ಪ ಮತ್ತು ಕಡೂರಿನಲ್ಲಿ ಪಾಲಿಟೆಕ್ನಿಕ್ ಕಾಲೇಜುಗಳು ಪ್ರಾರಂಭವಾಗದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

10. ಶ್ರೀ ಎಸ್. ಭೀಮಾನಾಯ್ಕ ಅವರು ಪಿ.ಯು.ಸಿ ವಿದ್ಯಾರ್ಥಿಗಳಿಗೆ ಬಿಸಿಯೂಟದ ಬದಲಾಗಿ ಲ್ಯಾಪ್‌ಟಾಪ್ ಒದಗಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

11. ಶ್ರೀ. ಬಿ.ಬಿ. ನಿಂಗಯ್ಯ ಅವರು ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬಣಕಲ್ ಟೌನ್, ಬಂಕೇನಹಳ್ಳಿ, ಮುಗ್ರಹಳ್ಳಿ, ಹ್ಯಾರಗುಡ್ಡೆ, ಕಿತ್ತಲೆಗಂಡಿ ಮತ್ತು ಗೋಣಿಬೀಡು ಹೋಬಳಿ, ಜಿ. ಅಗ್ರಹಾರ ಶ್ರೀ ಸುಬ್ರಮಣ್ಯಸ್ವಾಮಿ ದೇವಸ್ಥಾನದ ಹತ್ತಿರ ಹೇಮಾವತಿ ನದಿ ದಂಡೆ-ಸಂರಕ್ಷಣೆ ತಡೆಗೋಡೆ ನಿರ್ಮಾಣ ಕಾಮಗಾರಿ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

12. ಶ್ರೀ ವಿ. ಸುನೀಲಕುಮಾರ್ ಅವರು 2012-13ರ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಯವರ ವಿಶೇಷ ಅನುದಾನದಲ್ಲಿ ಉಡುಪಿ ಜಿಲ್ಲೆಗೆ ಬಾಕಿ ಅನುದಾನ ಬಿಡುಗಡೆಯಾಗದೆ ಕಾಮಗಾರಿಯು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13. ಶ್ರೀಮತಿ ವಿನಿಷಾ ನಿರೋ ಅವರು ಕರ್ನಾಟಕ ಅಲ್ಪಸಂಖ್ಯಾತರ ಆಯೋಗದಲ್ಲಿ ಎಲ್ಲಾ ಅಲ್ಪಸಂಖ್ಯಾತರ ಸಮುದಾಯದಲ್ಲಿ ಆಂಗ್ಲೋ ಇಂಡಿಯನ್ ಸಮುದಾಯಕ್ಕೆ ಪ್ರಾತಿನಿಧ್ಯ ನೀಡದಿರುವ ಬಗ್ಗೆ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

14. ಶ್ರೀ ಟಿ. ವೆಂಕಟರಮಣಯ್ಯ ಅವರು ದೊಡ್ಡಬಳ್ಳಾಪುರ ತಾಲ್ಲೂಕು ದೊಡ್ಡಬೆಳವಂಗಲ ಹೋಬಳಿ ಸಕ್ಕರೆ ಗೊಲ್ಲಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಬೆಂಗಳೂರು ಮಹಾನಗರದ ಕಸ ವಿಲೇ ಮಾಡುವುದನ್ನು ತಡೆಯುವ ಬಗ್ಗೆ ಮೂಲಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

15. ಶ್ರೀಮತಿ ಶಾರದ ಪೂರ್ಯನಾಯ್ಕ ಅವರು 2014-15ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣ ವಿಕಾಸ ಯೋಜನೆಗಳಿಗೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯನ್ನು ಆಧರಿಸಿ ಗ್ರಾಮಗಳನ್ನು ಆಯ್ಕೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

16. ಶ್ರೀಯುತರುಗಳಾದ ಎನ್.ಚಲುವರಾಯಸ್ವಾಮಿ, ಸಿ.ಎನ್.ಬಾಲಕೃಷ್ಣ, ಎಂ.ಟಿ. ಕೃಷ್ಣಪ್ಪ ಹೆಚ್.ಸಿ.ಬಾಲಕೃಷ್ಣ ಮತ್ತು ಕೆ.ಎಂ.ಶಿವಲಿಂಗೇಗೌಡ ಅವರುಗಳು ಬೆಂಗಳೂರು-ಹಾಸನ ರೈಲ್ವೆ ಮಾರ್ಗದ ಕಾಮಗಾರಿಗಳು ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

17. ಶ್ರೀ ರಾಜು ಅಲಗೂರು ಅವರು ಮಹಾರಾಷ್ಟ್ರ ರಾಜ್ಯದಲ್ಲಿ ಜಾರಿಯಲ್ಲಿರುವ ಮೌಢ್ಯ ಪ್ರತಿಬಂಧಕ ಕಾನೂನನ್ನು ಹಾಗೂ ಪ್ರಗತಿಪರ ವೈಜ್ಞಾನಿಕ ಚಿಂತನೆಗೆ ಒಳಪಡಿಸುವ ಕಾನೂನನ್ನು ರಾಜ್ಯದಲ್ಲಿ ಜಾರಿಗೆ ತರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

18. ಶ್ರೀ ಪಿ.ಆರ್. ಸುಧಾಕರ್ ಲಾಲ್ ಅವರು ಕೊರಟಗೆರೆ ಪಟ್ಟಣಕ್ಕೆ, ಬ್ರಹ್ಮಸಂದ್ರ ಕೆರೆಗೆ ಹಾಗೂ ಸುತ್ತಮುತ್ತಲಿನ ಹಳ್ಳಿಗಳಿಗೆ ಕುಡಿಯುವ ನೀರನ್ನು ಹೇಮಾವತಿ ನಾಲೆಯಿಂದ ಪೂರೈಸುವ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

19. ಶ್ರೀ ಗೋವಿಂದ ಎಂ. ಕಾರಜೋಳ ಅವರು ಬಾಗಲಕೋಟೆ ರೈತರು ಬೆಳೆಯುವ ಕಡಲೆ ಬೆಳೆಗೆ ಬೆಂಬಲ ಬೆಲೆ ನಿಗದಿ ಪಡಿಸುವ ಹಾಗೂ ಬೆಳೆ ಸಂರಕ್ಷಣೆಗೆ ಉಗ್ರಾಣ ಇಲ್ಲದಿರುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

20. ಶ್ರೀ ಎಸ್. ಮಧು ಬಂಗಾರಪ್ಪ ಅವರು ಸೊರಬ ಪಟ್ಟಣ ಪಂಚಾಯತಿಯಲ್ಲಿ ಮುಖ್ಯಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಯ ಮೇಲೆ ಗುರುತರವಾದ ದೂರುಗಳು ಇರುವುದರಿಂದ ಅವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

21. ಶ್ರೀ ಪಿಳ್ಳ ಮುನಿಶಾಮಪ್ಪ ಅವರು ದೇವನಹಳ್ಳಿ ಜಾಲಿಗೆ ಗ್ರಾಮ ಪಂಚಾಯಿತಿಯಲ್ಲಿ ನಡೆದಿರುವ ಅವ್ಯವಹಾರದ ನಿಮಿತ್ತ ಅಲ್ಲಿನ ಅಧಿಕಾರಿಯೊಬ್ಬರನ್ನು ಅಮಾನತ್ತಿನಲ್ಲಿಟ್ಟಿರುವುದರಿಂದ ಉಂಟಾಗಿರುವ ಗಲಭೆಯ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

22. ಶ್ರೀ ಆರ್.ಅಶೋಕ ಅವರು ಬೆಂಗಳೂರು ಪದ್ಮನಾಭನಗರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಬನಶಂಕರಿ ಬಸ್ ನಿಲ್ದಾಣದ ಬಳಿಯಿರುವ ಮಹಾನಗರ ಪಾಲಿಕೆಯ ಜಾಗವನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಶಪಡಿಸಿಕೊಳ್ಳುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

23. ಶ್ರೀ ಕೆ.ಬಿ. ಪ್ರಸನ್ನ ಕುಮಾರ್ ಅವರು ಶಿವಮೊಗ್ಗ ನಗರದಲ್ಲಿರುವ ಮೆಗ್ಗಾನ್ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶುಶ್ರೂಷಕಿಯರಿಗೆ ವಸತಿ ಗೃಹಗಳನ್ನು ನಿರ್ಮಿಸಿ ಕೊಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

24. ಶ್ರೀ ಆರ್. ಜಗದೀಶ್ ಕುಮಾರ್ ಅವರು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ ಮತ್ತು ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿಗಳ ಪ್ರಕಾರ ವೈದ್ಯಕೀಯ ಶಿಕ್ಷಣ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಖಾಸಗಿ ವೈದ್ಯ ವೃತ್ತಿ ಮಾಡಲು ಅವಕಾಶವಿಲ್ಲದಿದ್ದರೂ ಕಾನೂನು ಬಾಹಿರವಾಗಿ ಖಾಸಗಿ ವೈದ್ಯಕೀಯ ವೃತ್ತಿಯನ್ನು ಮಾಡುತ್ತಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ಎನ್.ಹೆಚ್.ಕೋನರೆಡ್ಡಿ ಬಿ.ಬಿ.ನಿಂಗಯ್ಯ, ಹಾಗೂ ಎಂ.ಟಿ.ಕೃಷ್ಣಪ್ಪ ಅವರುಗಳು ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂದು ಕೇಂದ್ರ ಸರ್ಕಾರ ವರದಿ ಸಲ್ಲಿಸಿರುವ ಬಗ್ಗೆ ರಾಜ್ಯ ಸರ್ಕಾರವು ತೆಗೆದುಕೊಳ್ಳುವ ನಿರ್ಣಯದ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಎಸ್.ಆರ್. ವಿಶ್ವನಾಥ್, ಎಂ. ಕೃಷ್ಣಪ್ಪ ಮತ್ತು ರವಿಸುಬ್ರಮಣ್ಯ ಅವರುಗಳು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಅರ್ಕಾವತಿ ಬಡಾವಣೆ ನಿರ್ಮಾಣಕ್ಕಾಗಿ ವಶಪಡಿಸಿಕೊಳ್ಳಲಾದ ಜಮೀನುಗಳ ಪೈಕಿ ಕೆಲವು ಭೂಮಾಲೀಕರಿಗೆ ಪರಿಹಾರ ರೂಪದಲ್ಲಿ ನಿವೇಶನ ಹಂಚಿಕೆ ಮಾಡಲಾಗಿದ್ದರೂ ಕಾನೂನು ಬಾಹಿರವಾಗಿ ಆ ಜಮೀನುಗಳನ್ನು ಡಿ ನೋಟಿಫಿಕೇಷನ್ ಮಾಡಿ ಆದೇಶ ಹೊರಡಿಸಿರುವ ಬಗ್ಗೆ ಚರ್ಚೆ.

ಮು.ತಿ.ನೋ.,.

3. ಶ್ರೀಯುತರುಗಳಾದ ಎಂ.ಟಿ.ಕೃಷ್ಣಪ್ಪ, ಎಸ್.ಆರ್.ಶ್ರೀನಿವಾಸ್, ಡಿ.ಸಿ.ತಮ್ಮಣ್ಣ ಅವರುಗಳು ಲೋಕೋಪಯೋಗಿ ಇಲಾಖೆಯಲ್ಲಿ ಅನುದಾನವನ್ನು ಬಿಡುಗಡೆ ಮಾಡುವಾಗ ಸಿಆರ್‌ಎಫ್ 5054 ಅಪೆಂಡಿಕ್ಸ್-ಸಿ ಮತ್ತು 3054 ಅಪೆಂಡಿಕ್ಸ್ -ಸಿ ಗಳಡಿಯಲ್ಲಿ ತಾರತಮ್ಯವಾಗಿರುವ ಬಗ್ಗೆ ಚರ್ಚೆ.

4. ಶ್ರೀಯುತರುಗಳಾದ ರಾಜು ಅಲಗೂರು, ಡಾ॥ ಉಮೇಶ್ ಜಿ ಜಾಧವ್, ವಿಜಯಾನಂದ ಎಸ್. ಕಾಶಪ್ಪನವರ್, ಕೆ.ಷಡಕ್ಷರಿ, ಡಾ॥ ಅಜಯಸಿಂಗ್ ಮತ್ತು ಇತರರು 2014ನೇ ರಾಜ್ಯಪಾಲರ ಭಾಷಣದಲ್ಲಿ ಹೊಸ ತಾಲ್ಲೂಕುಗಳ ರಚನೆ ಬಗ್ಗೆ ಪ್ರಸ್ತಾಪಿಸಿದ್ದು ಆಯವ್ಯಯ ಭಾಷಣದಲ್ಲಿ ಈ ಕುರಿತು ಪ್ರಸ್ತಾಪವಿಲ್ಲದಿರುವ ಬಗ್ಗೆ ಚರ್ಚೆ.

5. ಶ್ರೀಯುತರುಗಳಾದ ಕೆ.ಶಿವಮೂರ್ತಿ, ಕೆ.ಎಂ.ತಿಮ್ಮರಾಯಪ್ಪ, ಎಸ್.ತಿಪ್ಪೇಸ್ವಾಮಿ, ಭೀಮನಾಯ್ಕ, ರಾಜಣ್ಣ, ಈ. ತುಕಾರಾಂ ಮತ್ತು ಇತರರು ಬಯಲು ಸೀಮೆ ಪ್ರದೇಶಗಳಿಗೆ ಕುಡಿಯುವ ನೀರನ್ನು ಪೂರೈಸಲು ಕೆರೆಗಳಿಗೆ ನೀರು ತುಂಬಿಸುವ ಹಾಗೂ ನೀರಾವರಿ ಶುದ್ಧೀಕರಣ ಘಟಕವನ್ನು ಸ್ಥಾಪಿಸುವ ಬಗ್ಗೆ ಮತ್ತು ಬಯಲು ಸೀಮೆ ಪ್ರದೇಶದಿಂದ ಗುಳೆ ಹೋಗುವವರನ್ನು ತಡೆಗಟ್ಟುವ ವಿಷಯದ ಬಗ್ಗೆ ಚರ್ಚೆ.

6. ಶ್ರೀಯುತರುಗಳಾದ ಟಿ.ವೆಂಕಟರಮಣಯ್ಯ, ಎಸ್.ಎನ್.ನಾರಾಯಣಸ್ವಾಮಿ, ಎಂ.ಟಿ. ಕೃಷ್ಣಪ್ಪ, ಎಸ್.ಎನ್. ಸುಬ್ಬಾರೆಡ್ಡಿ ಮತ್ತು ಎಂ.ಸತೀಶ್‌ರೆಡ್ಡಿ ಅವರುಗಳು 2014-15ನೇ ಸಾಲಿನ ಆಯವ್ಯಯ ಮಂಗಡದಲ್ಲಿ ಅಬಕಾರಿ ಇಲಾಖೆಯ ಬಾರ್ ಮತ್ತು ರೆಸ್ಟೋರೆಂಟ್ ಮೇಲೆ ವಿಧಿಸಿರುವ ಮೌಲ್ಯವರ್ಧಿತ ತೆರಿಗೆ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)